Akashvani : Bangalore

Regional Bulletin In Kannada

04.05.2025 / 14.30 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

ಮುಖ್ಯಾಂಶಗಳು

- ಸಮಾಜಘಾತಕ ಶಕ್ತಿಗಳನ್ನು ಮಟ್ಟಹಾಕಲು ವಿಶೇಷ ಪಡೆ ಅಗತ್ಯ- ಮುಖ್ಯಮಂತ್ರಿ ಸಿದ್ದರಾಮಯ್ಯ
- ಅರಣ್ಯ ಭೂಮಿ ಕಬಳಿಸಲು ಪ್ರಯತ್ನಿಸುತ್ತಿರುವವರ ವಿರುದ್ಧ ಕಾನೂನು ಕ್ರಮ- ಅರಣ್ಯ ಸಚಿವ ಈಶ್ವರ ಖಂಡ್ರೆ
- ರಾಜ್ಯದ ಪರೀಕ್ಷಾ ಕೇಂದ್ರಗಳಲ್ಲಿ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ-ನೀಟ್ ಆರಂಭ
- ರಾಜ್ಯದ್ಯಾಂತ ಮಹರ್ಷಿ ಭಗೀರಥ ಜಯಂತಿ ಆಚರಣೆ

<><*<><>*><>

ಸಮಾಜಘಾತಕ ಶಕ್ತಿಗಳನ್ನು ಮಟ್ಟಹಾಕಲು ಹಾಗೂ ಪತ್ತೆ ಹಚ್ಚಲು ಒಂದು ವಿಶೇಷ ಪಡೆಯ ಅಗತ್ಯವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ರಾಜ್ಯದ ಕರಾವಳಿ ಪ್ರದೇಶದಲ್ಲಿ ಕೋಮು ಹಿಂಸೆ ನಿಗ್ರಹ ಕಾರ್ಯಪಡೆ ರಚಿಸಲು ಸರ್ಕಾರ ಮುಂದಾಗಿರುವ ಬಗ್ಗೆ ಹಾವೇರಿಯ ಹಾನಗಲ್ಲ ತಾಲೂಕಿನ ಅಕ್ಕಿ ಆಲೂರಿನ ಎನ್‌ಡಿಪಿಯು ಕಾಲೇಜ್ ಆವರಣದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಕುರಿತು ಗೃಹ ಸಚಿವರೊಂದಿಗೆ ಚರ್ಚಿಸಲಾಗುವುದು ಎಂದರು.

ಜಾತಿಗಣತಿ ಮಾಡಿಸುವ ಮೂಲಕ ರಾಜ್ಯ ಸರ್ಕಾರ ಜಾತಿ ಜಾತಿಗಳ ನಡುವೆ ಸಂಘರ್ಷಕ್ಕೆ ಎಡೆಮಾಡಿಕೊಡುತ್ತಿದೆ ಎಂದು ಟೀಕೆ ಮಾಡುತ್ತಿದ್ದವರು, ಈಗ ಕೇಂದ್ರ ಸರ್ಕಾರ ಜಾತಿಗಣತಿ ಮಾಡಿಸುವುದನ್ನು ಮುಕ್ತ ಮನಸ್ಸಿನಿಂದ ಸ್ವಾಗತ ಮಾಡುತ್ತಿದ್ದಾರೆ ಎಂದು ಹೇಳಿದರು.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ (೨೮ ಸೆಕೆಂಡ್ಸ್)

ಪಾಕಿಸ್ತಾನದ ವಿಚಾರದಲ್ಲಿ ಕಾಂಗ್ರೆಸ್ ಇಬ್ಬಗೆಯ ನೀತಿಯನ್ನು ಅನುಸರಿಸುತ್ತಿದೆ ಎಂದು ಮಾಜಿ ಪ್ರಧಾನಿ ದೇವೇಗೌಡರು ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ದೇವೇಗೌಡರು ಎನ್‌ಡಿಎ ಸೇರುವ ಮುನ್ನ ಪ್ರಧಾನಿ ನರೇಂದ್ರ ಮೋದಿಯವರ ಬಗ್ಗೆ ಏನೇನು ಮಾತನಾಡುತ್ತಿದ್ದರು? ಈಗ ಏನು ಮಾತನಾಡುತ್ತಿದ್ದಾರೆ? ಅವರದು ಇಬ್ಬಗೆಯ ನೀತಿ ಎಂದು ದೂರಿದರು.

<><*<><>*><>

ಅರಣ್ಯ ಪ್ರದೇಶದಲ್ಲಿ ಆಗಿರುವ ಅಕ್ರಮ ಮಂಜೂರಾತಿ ರದ್ದುಪಡಿಸಿ, ಅರಣ್ಯ ಭೂಮಿ ಕಬಳಿಸಲು ಪ್ರಯತ್ನಿಸುತ್ತಿರುವವರ ವಿರುದ್ಧ ಕಾನೂನು ರೀತಿ ಕಠಿಣ ಕ್ರಮ ಕೈಗೊಂಡು, ಅರಣ್ಯ ಭೂಮಿ ಸಂರಕ್ಷಿಸುವಂತೆ ಅಧಿಕಾರಿಗಳಿಗೆ ಅರಣ್ಯ ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ.

ಶಿರಾ ತಾಲೂಕಿನ ಶೀಬಿ ಅರಣ್ಯ ಪ್ರದೇಶಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದ ಅವರು, ಬೆಂಗಳೂರು-ಪುಣೆ ಹೆದ್ದಾರಿಯ ಪಕ್ಕದಲ್ಲೇ ಇರುವ ಈ ಅರಣ್ಯ ಭೂಮಿಗೆ ಭಾರೀ ಮೌಲ್ಯವಿದ್ದು, ಕೆಲವರು ಇದನ್ನು ಕಬಳಿಸಲು ಮತ್ತು ಒತ್ತುವರಿ ಮಾಡಲು ಯತ್ನಿಸುತ್ತಿದ್ದಾರೆ. ಹೀಗಾಗಿ ಅರಣ್ಯ ಸಿಬ್ಬಂದಿ ಕಟ್ಟೆಚ್ಚರದಿಂದ ಇರಬೇಕು ಎಂದು ನಿರ್ದೇಶನ ನೀಡಿದರು.

ಕೆಲವರು ನ್ಯಾಯಾಲಯದಲ್ಲಿ ಭೂಮಿಯ ಮಾಲೀಕತ್ವದ ಹೋರಾಟ ನಡೆಸುತ್ತಿದ್ದಾರೆ. ಸುಪ್ರೀಂಕೋರ್ಟ್ ಡಿನೋಟಿಫಿಕೇಷನ್ ಆಗದ ಹೊರತು, ಅರಣ್ಯ ಭೂಮಿ ಅರಣ್ಯವಾಗಿಯೇ ಉಳಿಯುತ್ತದೆ. ಡಿನೋಟಿಫಿಕೇಷನ್ ಆಗದ ಈ ಅರಣ್ಯದಲ್ಲಿನ ಅಕ್ರಮ ಮಂಜೂರಾತಿ

ರದ್ದುಪಡಿಸುವಂತೆ ಉಪವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ದಾವೆ ಹೂಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಶಿರಾ ಶಾಸಕ ಟಿ.ಬಿ.ಜಯಚಂದ್ರ ಅವರೂ ಸಹ ಈ ಅರಣ್ಯ ಪ್ರದೇಶವನ್ನು ಸಂರಕ್ಷಿಸಲು ಬೇಲಿ ಹಾಕುವ ಬಗ್ಗೆ ಪ್ರಸ್ತಾವನೆ ನೀಡಿದ್ದು, ಈ ಅರಣ್ಯ ಪ್ರದೇಶವು ಭೂಮಾಫಿಯಾದ ಪಾಲಾಗದಂತೆ ಉಳಿಸಲು ಎಲ್ಲ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಸಚಿವ ಈಶ್ವರ ಖಂಡ್ರೆ ಭರವಸೆ ನೀಡಿದರು.

<><*<><>*><>

ದೇಶದ ಐದು ಸಾವಿರಕ್ಕೂ ಹೆಚ್ಚು ಕೇಂದ್ರಗಳಲ್ಲಿ ಮತ್ತು ವಿದೇಶಗಳ ೧೩ ನಗರಗಳಲ್ಲಿ ಇಂದು ರಾಷ್ಟ್ರೀಯ ಅರ್ಹತಾ ಪ್ರವೇಶ ಪರೀಕ್ಷೆ- ನೀಟ್ ಯುಜಿ -೨೦೨೫ ನಡೆಯುತ್ತಿದೆ.

ವೈದ್ಯಕೀಯ ಪ್ರವೇಶಕ್ಕೆ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ - ಎನ್‌ಟಿಎ ಈ ಪರೀಕ್ಷೆಯನ್ನು ನಡೆಸುತ್ತಿದೆ. ರಾಜ್ಯದಲ್ಲಿ ೩೮೧ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯುತ್ತಿದ್ದು, ೧ ಲಕ್ಷದ ೪೯ ಸಾವಿರ ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದಾರೆ. ಪರೀಕ್ಷೆಗಾಗಿ ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯಗೊಳಿಸಲಾಗಿದೆ. ನಿಯೋಜಿತ ಪೊಲೀಸ್ ಸಿಬ್ಬಂದಿ, ಸುರಕ್ಷಾತಾ ತಪಾಸಣೆಗಳನ್ನು ನಡೆಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಾಲ್ಕು ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯುತ್ತಿದೆ. ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯುತ್ ವ್ಯವಸ್ಥೆ, ಸಿಸಿ ಕ್ಯಾಮೆರಾ ಅಳವಡಿಕೆ, ಆಂಬುಲೆನ್ಸ್ ಸೇವೆ, ಪರೀಕ್ಷಾ ಕೇಂದ್ರಗಳಲ್ಲಿ ಸ್ವಚ್ಛತೆ ಮತ್ತು ಪರೀಕ್ಷೆಗೆ ಹಾಜರಾಗುವ ವಿಶೇಷ ಚೇತನ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಗಾಲಿಕುರ್ಚಿ ಹಾಗೂ ಆರೋಗ್ಯ ಘಟಕ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮೋಹನ್ ಕುಮಾರ್ ತಿಳಿಸಿದ್ದಾರೆ.

<><*<><>*><>

ರಾಜ್ಯಾದ್ಯಂತ ಇಂದು ಮಹರ್ಷಿ ಭಗೀರಥ ಜಯಂತಿ ಆಚರಿಸಲಾಯಿತು.

ಚಿತ್ರದುರ್ಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರ ಸಭೆ ಸಹಯೋಗದಲ್ಲಿ, ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾದ ಮಹರ್ಷಿ ಭಗೀರಥ ಜಯಂತಿ ಕಾರ್ಯಕ್ರಮದಲ್ಲಿ ಭಗೀರಥರ ಭಾವಚಿತ್ರಕ್ಕೆ ಚಿತ್ರದುರ್ಗ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಪುಷ್ಪನಮನ ಸಲ್ಲಿಸಿದರು.

ನಂತರ ಮಾತನಾಡಿದ ಅವರು, ಜೀವನದಲ್ಲಿ ಎಂತಹ ಕಷ್ಟ ಎದುರಾದರೂ ಛಲ ಬಿಡದೆ, ಸತತ ಪ್ರಯತ್ನದಿಂದ ಸಾಧನೆ ಮಾಡುವುದಕ್ಕೆ ಮಹರ್ಷಿ ಭಗೀರಥರು ಪ್ರೇರಣೆಯಾಗಿದ್ದಾರೆ ಎಂದು ಹೇಳಿದ್ದಾರೆ.

ಪ್ರಯತ್ನ ಹಾಗೂ ಸಾಧನೆಯ ದ್ಯೋತಕವಾದ ಭಗೀರಥ ಮಹರ್ಷಿಯ ಆದರ್ಶಗಳನ್ನು ಎಲ್ಲರೂ ಜೀವನದಲ್ಲಿ ಮೈಗೂಡಿಸಿಕೊಳ್ಳಬೇಕು. ಸಮಾಜದಲ್ಲಿ ಇಂದಿಗೂ ಕಠಿಣ ಪರಿಶ್ರಮಕ್ಕೆ ಭಗೀರಥ ಯತ್ನ ಎಂದು ಕರೆಯಲಾಗುತ್ತದೆ. ಭಗೀರಥರು ಎಂದರೆ ಪ್ರಯತ್ನದ ಸಾಧನೆಯ ದ್ಯೋತಕವಾಗಿದ್ದು, ಸಾಕ್ಷತ್ ಗಂಗೆಯನ್ನು ಧರೆಗಿಳಿಸಿದ ಮಹಾಪುರುಷರು ಎಂದರು.

<><*<><>*><>

ಸರ್ವೇ ಜನಃ ಸುಖಿನೋ ಭವಂತು ಎಂಬ ಧ್ಯೇಯ ವಾಕ್ಯದೊಂದಿಗೆ ಕಾರ್ಯನಿರ್ವಹಿಸುತ್ತಿರುವ ಚಿತ್ರದುರ್ಗದ ಕೆಳಕೋಟೆ ಆಕಾಶವಾಣಿ ಕೇಂದ್ರಕ್ಕೆ ಈಗ ೩೪ ವರ್ಷಗಳ ಸಂಭ್ರಮ.

೧೯೯೧ ಮೇ ೩ರಂದು ಆರಂಭವಾದ ಆಕಾಶವಾಣಿ ಕೇಂದ್ರ ನಿರಂತರವಾಗಿ ಶಿಕ್ಷಣ, ಮಾಹಿತಿ, ಮನರಂಜನಾ ಕಾರ್ಯಕ್ರಮಗಳನ್ನು ಪ್ರಸಾರ ಮಾಡುತ್ತಿದೆ. ೩೫ನೇ ವರ್ಷಕ್ಕೆ ಪದಾರ್ಪಣೆ ಮಾಡಿರುವ ಸಂದರ್ಭದಲ್ಲಿ ಆಕಾಶವಾಣಿ ಕೇಂದ್ರಕ್ಕೆ ಸಂಸದ ಗೋವಿಂದ ಎಂ ಕಾರಜೋಳ, ಸಾಹಿತಿ ಡಾ.ಬಿ ಎಲ್ ವೇಣು ಸೇರಿದಂತೆ ಮತ್ತಿತರ ಗಣ್ಯರು ಭೇಟಿ ನೀಡಿ ಸಿಬ್ಬಂದಿ ವರ್ಗಕ್ಕೆ ಶುಭ ಹಾರೈಸಿದರು.

ಬಳಿಕ ಮಾತನಾಡಿದ ಸಂಸದ ಗೋವಿಂದ ಕಾರಜೋಳ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪ್ರಾಯೋಜಿತ ಕಾರ್ಯಕ್ರಮಗಳನ್ನು, ಸರ್ಕಾರದ ವಿವಿಧ ಯೋಜನೆಗಳನ್ನು ಜನರಿಗೆ ಮುಟ್ಟಿಸುವಲ್ಲಿ ಆಕಾಶವಾಣಿ ಯಶಸ್ವಿಯಾಗಿದೆ. ಪ್ರಸಾರವಾಗುವ ಸಂದರ್ಶನ, ನಾಟಕ, ರೂಪಕಗಳು ನೈತಿಕ ಮೌಲ್ಯಗಳನ್ನು ಬಿತ್ತುವಲ್ಲಿ ಸಹಕಾರಿಯಾಗಿದೆ. ಆಕಾಶವಾಣಿಯಲ್ಲಿ ಪ್ರಸಾರವಾಗುವ ಪ್ರಧಾನಿ ಅವರ 'ಮನ್ ಕೀ ಬಾತ್' ವಿಶ್ವದಾದ್ಯಂತ ಜನರನ್ನು ಆಕರ್ಷಿಸುತ್ತಿದೆ ಎಂದು ಹೇಳಿದರು.

<><*<><>*><>

ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ-೨೦೨೫ಕ್ಕೆ ಸಂಬಂಧಿಸಿದಂತೆ ಉತ್ತರ ಕನ್ನಡ ಜಿಲ್ಲಾದ್ಯಂತ ನಾಳೆಯಿಂದ ಪರಿಶಿಷ್ಟ ಜಾತಿ ಸಮುದಾಯದ ವಿವಿಧ ಅಂಶಗಳ ಬಗ್ಗೆ ದತ್ತಾಂಶಗಳನ್ನು ಸಂಗ್ರಹಿಸಲು, ಮನೆ ಮನೆ ಸಮೀಕ್ಷೆ ಕಾರ್ಯ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಸಹಕರಿಸುವಂತೆ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಮನವಿ ಮಾಡಿದ್ದಾರೆ.

ಈ ಸಮೀಕ್ಷೆ ಕಾರ್ಯಕ್ಕೆ ಪ್ರತಿ ಮತಗಟ್ಟೆಗೆ ಒಬ್ಬರಂತೆ ಗಣತಿದಾರರು, ಪ್ರತಿ ೧೦ ಗಣತಿದಾರರಿಗೆ ಒಬ್ಬ ಮೇಲ್ವಿಚಾರಕರನ್ನು ನೇಮಿಸಲಾಗಿದೆ. ನಾಳೆಯಿಂದ ಇದೇ ೧೭ ರವರೆಗೆ ಗಣತಿದಾರರು, ಮನೆ ಮನೆ ಭೇಟಿ ನೀಡಿ ಸಮೀಕ್ಷೆ ನಡೆಸಲಿದ್ದು, ಇದೇ ೧೯ ರಿಂದ ೨೧ ವರೆಗೆ ಮತಗಟ್ಟೆ ಪ್ರದೇಶವಾರು ವಿಶೇಷ ಶಿಬಿರಗಳಲ್ಲಿ ಸಮೀಕ್ಷೆ ನಡೆಯಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಗಣತಿದಾರರು ಮನೆ ಮನೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಪರಿಶಿಷ್ಟ ಜಾತಿಗೆ ಸೇರಿದ ವ್ಯಕ್ತಿಗಳು, ತಮ್ಮ ಆಧಾರ ಕಾರ್ಡ್, ಪಡಿತರ ಚೀಟಿ, ಮೊಬೈಲ್ ಸಂಖ್ಯೆ ನೀಡಿ, ಗಣತಿ ಕಾರ್ಯಕ್ಕೆ ಸಹಕರಿಸಬೇಕು. ಜಿಲ್ಲಾಧಿಕಾರಿಗಳ ಕಾರ್ಯಾಲಯದಿಂದ ಸಹಾಯವಾಣಿ ತೆರೆಯಲಾಗಿದೆ. ಹೆಚ್ಚಿನ ಮಾಹಿತಿಗಾಗಿ ೦೮೩೮೨-೨೨೯೮೫೭, ೯೪೮೩೫೧೧೦೧೫ ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

<><*<><>*><>

ಗ್ರಾಮೀಣ ಜನರು ಬೇಸಿಗೆಯಲ್ಲಿ ನಗರ ಪ್ರದೇಶಗಳಿಗೆ ಗುಳೆ ಹೋಗುವುದನ್ನು ತಪ್ಪಿಸಲು ಸರ್ಕಾರ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ‘ದುಡಿಯೋಣ ಬಾ’ ಅಭಿಯಾನ ಆರಂಭಿಸಿದೆ ಎಂದು ಗದಗ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ ತಿಳಿಸಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ ಅವರು, ಗದಗ ತಾಲೂಕಿನ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಉದ್ಯೋಗ ಖಾತ್ರಿ ಕೆಲಸ ಆರಂಭಿಸಲಾಗಿದೆ. ನಿತ್ಯ ಲ ಸಾವಿರಕ್ಕೂ ಹೆಚ್ಚು ಜನರು ಕೆಲಸ ನಿರ್ವಹಿಸುತ್ತಿದ್ದಾರೆ. ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಮೇ ತಿಂಗಳಾದ್ಯಂತ ಕೆಲಸ ಒದಗಿಸಲು ’ದುಡಿಯೋಣ ಬಾ’ ಅಭಿಯಾನ ಹಮ್ಮಿಕೊಳ್ಳಲು ಪಿಡಿಒ ಮತ್ತು ಎಲ್ಲ ಹಂತದ ನರೇಗಾ ಯೋಜನೆಯ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

<><*<><>*><>

ಕೋಲಾರ ಜಿಲ್ಲೆಯಲ್ಲಿ ಮುಂಗಾರು ಆರಂಭಗೊಂಡಿದ್ದು, ಯುಗಾದಿ ನಂತರ ಮಳೆ ಬಿದ್ದ ಬಳಿಕ ಶಾಸ್ತ್ರೋಕ್ತವಾಗಿ ಹೊನ್ನೇಗಿಲು ಪೂಜೆ ನಡೆಸಿದ ನಂತರವೇ ಈ ವರ್ಷದ ಕೃಷಿ ಚಟುವಟಿಕೆಗಳನ್ನು ಆರಂಭಿಸುವ ಸಂಪ್ರದಾಯ ನೂರಾರು ವರ್ಷಗಳಿಂದ ತಾಲೂಕಿನ ಅರಾಭಿಕೊತ್ತನೂರು ಗ್ರಾಮದಲ್ಲಿ ನಡೆದುಕೊಂಡು ಬಂದಿದೆ. ಎತ್ತುಗಳನ್ನು ಕಟ್ಟಿದ ನೇಗಿಲಿಗೆ ಶ್ರದ್ಧಾಭಕ್ತಿಯಿಂದ ಪೂಜೆ ಸಲ್ಲಿಸಲಾಯಿತು.

ಗ್ರಾಮದ ಪಟಾಲಮ್ಮ ದೇವಾಲಯದ ಆವರಣದಲ್ಲಿ ಜೋಡೆತ್ತು ಕಟ್ಟಿದ ಹೊನ್ನೇಗಿಲಿಗೆ ಗ್ರಾಮದ ಮುಖಂಡ ಜಯರಾಮೇಗೌಡ ಪೂಜೆ ಸಲ್ಲಿಸಿದರು. ಹೊನ್ನೇಗಿಲು ಪೂಜೆ ನಂತರ ಒಂದು ಸುತ್ತು ಉಳುಮೆ ಮಾಡುವ ಮೂಲಕ ಈ ಸಾಲಿನ ಕೃಷಿ ಚಟುವಟಿಕೆಗಳಿಗೆ ಚಾಲನೆ ದೊರೆಯಿತು.

<><*<><>*><>

ಮಂಗಳೂರಿನಲ್ಲಿ ಇತ್ತೀಚೆಗೆ ಜರುಗಿದ ೨೪ನೇ ರಾಜ್ಯ ಮಟ್ಟದ ವುಶು ಚಾಂಪಿಯನ್‌ಶಿಪ್‌ನಲ್ಲಿ ವಿಜಯನಗರ ಜಿಲ್ಲೆಯ ವುಶು ಕ್ರೀಡಾಪಟುಗಳು ೪ ಚಿನ್ನ ಹಾಗೂ ೩ ಕಂಚಿನ ಪದಕಗಳನ್ನು ಗಳಿಸಿದ್ದಾರೆ.

ಮಂಗಳೂರಿನ ಜಿಲ್ಲಾ ಒಳ ಕ್ರೀಡಾಂಗಣದಲ್ಲಿ ಇತ್ತೀಚೆಗೆ ನಡೆದ ರಾಜ್ಯ ಮಟ್ಟದ ವುಶು ಚಾಂಪಿಯನ್‌ಶಿಪ್‌ನಲ್ಲಿ ಎಸ್.ಅಖಿಲ್, ಅಂಕಿತ, ವಿಜಯಕುಮಾರ್ ಹಾಗೂ ಗಣೇಶ್ ಚಿನ್ನದ ಪದಕವನ್ನು ಗಳಿಸಿ, ಮುಂಬರುವ ರಾಷ್ಟ್ರ ಮಟ್ಟದ ವುಶು ಪಂದ್ಯಾವಳಿಗೆ ಆಯ್ಕೆಯಾಗಿದ್ದಾರೆ.

<><*<><>*><>